## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಬುದ್ಧ ಯೋಜನೆಯಡಿ ವಿದೇಶಿ ವಿಶ್ವವಿದ್ಯಾಲಯದಲ್ಲಿ ಪಿ.ಹೆಚ್.ಡಿ ಅಧ್ಯಯನದ ಅವಕಾಶವನ್ನು ಕೈಬಿಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಕಇ 468 ಪಕವಿ 2021, ದಿನಾಂಕ: 11-08-2021.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 161 ಪಕವಿ 2021 ದಿನಾಂಕ: 07-10-2023.
3. ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಸಮಾಜ ಕಲ್ಯಾಣ ಇಲಾಖೆ ರವರ ಏಕ ಕಡತ ಸಂಖ್ಯೆSWD-PETC0S-6(FS)/32/2023-PETC-SOCIAL WELFARE COMMISSIONER (1181745).

****

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಆದೇಶಗಳಲ್ಲಿ "**ಪ್ರಬುದ್ಧ**" ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಉನ್ನತ ವ್ಯಾಸಂಗಕ್ಕೆ ಆಯ್ಕೆ ಮಾಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸ್ನಾತಕೋತ್ತರ ಅಥವಾ ಪಿ.ಹೆಚ್.ಡಿ ಎರಡರಲ್ಲಿ ಒಂದಕ್ಕೆ ಒಂದು ಬಾರಿ ಮಾತ್ರ ಇಲಾಖೆಯಿಂದ ಧನ ಸಹಾಯವನ್ನು ಪಡೆಯಲು ಅರ್ಹರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ 2023-24 ನೇ ಸಾಲಿನ ಜುಲೈ ತಿಂಗಳ ಆಯವ್ಯಯ ಭಾಷಣದ ಘೋಷಣೆಯಂತೆ QS/US News Overall Global Ranking 250 ರೊಳಗಿನ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿಗೆ ಪ್ರವೇಶ

ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪ್ರಬುದ್ಧ ಯೋಜನೆಯಡಿಯಲ್ಲಿ 2023-24ನೇ ಸಾಲಿನಿಂದ ಅರ್ಜಿ ಸಲ್ಲಿಸಲು ಮಾನದಂಡವನ್ನು ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಿದೇಶಿ ವಿಶ್ವವಿದ್ಯಾಲಯದಲ್ಲಿ ಪಿ.ಹೆಚ್.ಡಿ ಅಧ್ಯಯನ ಮಾಡಲು ಪ್ರಬುದ್ಧ ಯೋಜನೆಯಡಿಯಲ್ಲಿ ಧನ ಸಹಾಯ ನೀಡಲು ಸರ್ಕಾರದ ಆದೇಶ ಸಂಖ್ಯೆ:ಸಕಇ 468 ಪಕವಿ 2021, ದಿನಾಂಕ: 11-08-2021 ರಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ, ಪ್ರಬುದ್ಧ ಯೋಜನೆಯಡಿ ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ ಅಧ್ಯಯನಕ್ಕೆ ಕಳೆದ ಮೂರು ವರ್ಷದ ಆಯ್ಕೆಯಾದ ಅಭ್ಯರ್ಥಿಗಳ ಸಂಖ್ಯೆ ಮತ್ತು ವೆಚ್ಚದ ವಿವರವನ್ನು ಈ ಕೆಳಕಂಡಂತಿದೆ.

| ಕ್ರ.ಸಂ | ವರ್ಷ | ಅಭ್ಯರ್ಥಿಗಳ ಸಂಖ್ಯೆ | ಸಂಪೂರ್ಣ ಕೋರ್ಸ್ ಗೆ ತಗಲುವ ವೆಚ್ಚ ರೂ. |
|---|---|---|---|
| 01 | 2021-22 | 03 | ರೂ.3,16,95,810/- |
| 02 | 2022-23 | 02 | ರೂ.1,62,81,413/- |
| 03 | 2023-24 | 04 | ರೂ.3,81,23,359/- |
| **ಒಟ್ಟು** | | **09** | **ರೂ.8,61,00,582/-** |

ಕಳೆದ ಮೂರು ವರ್ಷದಲ್ಲಿ ಪಿ.ಹೆಚ್.ಡಿ ವ್ಯಾಸಂಗಕ್ಕೆ ಆಯ್ಕೆ ಯಾಗಿರುವ 09 ಅಭ್ಯರ್ಥಿಗಳ ತಲಾವಾರು ವೆಚ್ಚ ರೂ.95,66,731/- ಗಳಾಗಿರತ್ತದೆ. ಆದರೆ ಒಂದು ವರ್ಷದ ಸ್ನಾತಕೋತ್ತರ ಕೋರ್ಸ್ ನ ಸರಾಸರಿ ರೂ.35.00 ರಿಂದ ರೂ.40.00 ಲಕ್ಷ ವೆಚ್ಚವಾಗುತ್ತದೆ ಹಾಗೂ 2 ವರ್ಷದ ಸ್ನಾತಕೋತ್ತರ ಕೋರ್ಸ್ ನ ವೆಚ್ಚ ಅಂದಾಜು ರೂ.50 ರಿಂದ ರೂ.60 ಲಕ್ಷವಾಗುತ್ತದೆ. ಪಿ.ಹೆಚ್.ಡಿ ಒಬ್ಬ ಅಭ್ಯರ್ಥಿಗೆ ನೀಡುವ ಸಹಾಯ ಧನದಲ್ಲಿ ಕನಿಷ್ಠ 2 ರಿಂದ 3 ಸ್ನಾತಕೋತ್ತರ ಪದವಿ ಅಧ್ಯಯನ ಮಾಡುವ ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸಬಹುದಾಗಿರುತ್ತದೆ. ಆದ್ದರಿಂದ, ಪ್ರಬುದ್ಧ ಯೋಜನೆಯಡಿಯಲ್ಲಿ ಪಿ.ಹೆಚ್.ಡಿ ಅಧ್ಯಯನಕ್ಕೆ ಸಹಾಯಧನ ನೀಡುವ ಅವಕಾಶವನ್ನು ಕೈಬಿಡುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: File No.:SWD-PETC0S-6(FS)/32/2023-PETC (E Office-1181745) ದಿನಾಂಕ: 07-10-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2023-24 ನೇ ಸಾಲಿನಿಂದ ಪ್ರಬುದ್ಧ ಯೋಜನೆಯಡಿಯಲ್ಲಿ ವಿದೇಶಿ ವಿಶ್ವವಿದ್ಯಾಲಯದಲ್ಲಿ ಪಿ.ಹೆಚ್.ಡಿ ಅಧ್ಯಯನ ಮಾಡಲು ಕಲ್ಪಿಸಲಾಗಿರುವ ಅವಕಾಶವನ್ನು ಕೈಬಿಟ್ಟು ಸ್ನಾತಕೋತ್ತರ ಅಧ್ಯಯನಕ್ಕೆ ಮಾತ್ರ ಈ ಕೆಳಕಂಡ ಷರತ್ತಿಗೊಳಪಟ್ಟು ಅವಕಾಶ ಕಲ್ಪಿಸಿ ಆದೇಶಿಸಿದೆ.

**ಷರತ್ತು:**

1. ಈಗಾಗಲೇ ಪಿ.ಹೆಚ್.ಡಿ ಅಧ್ಯಯನಕ್ಕೆ ಪ್ರಬುದ್ಧ ಯೋಜನೆಯಡಿಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಧನಸಹಾಯ ಮಂಜೂರು ಮಾಡುವುದು.
2. 2023-24ನೇ ಸಾಲಿನಲ್ಲಿ ಪಿ.ಹೆಚ್.ಡಿ ಅಧ್ಯಯನಕ್ಕೆ ಪ್ರಬುದ್ಧ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿ ಆಯ್ಕೆಗೆ ಭಾಕಿ ಇರುವ ಪ್ರಕರಣಗಳು ಸರ್ಕಾರದ ಅಂತಿಮ ನಿರ್ಣಯಗೊಳ್ಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/10

(ಎಲ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಎ&ಇ ಲೆಕ್ಕ ಪರಿಶೋಧನೆ-1) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕೋಶ, ಕಲ್ಯಾಣ ಕೇಂದ್ರ, ಬೆಂಗಳೂರು.

3. ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ವಸಂತ ನಗರ, ಬೆಂಗಳೂರು.
4. ಸಮಾಜ ಕಲ್ಯಾಣ ಇಲಾಖೆ ಕಂಟ್ರೋಲ್ ರೂಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಟ್ಟಡ, ಯವನಿಕ, ನೃಪತುಂಗ ರಸ್ತೆ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**<u>ಪ್ರತಿ ಮಾಹಿತಿಗಾಗಿ:-</u>**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

*****